# ಆರೋಗ್ಯ ರಕ್ಷಣೆಗೆ ಪ್ರತಿಯೊಬ್ಬರೂ ಆದ್ಯತೆ ನೀಡಬೇಕು

• **ಕನ್ನಡಪ್ರಭ ವಾರ್ತೆ** ಕೋಲಾರ

ಮಾನವನಿಗೆ ಆರೋಗ್ಯವೇ ದೊಡ್ಡ ಸಂಪತ್ತು, ಯಾರು ಎಷ್ಟೆ ಆಸ್ತಿ ಪಾಸ್ತಿ ಸಂಪಾದಿಸಿದರೂ ಒಂದು ತುತ್ತು ಅನ್ನ ತಿನ್ನುವುದಕ್ಕೂ ಆಗದ ಪರಿಸ್ಥಿತಿಯಲ್ಲಿ ಇರುವವರನ್ನು ನಾವು ನೋಡುತ್ತಿದ್ದೇವೆ. ಆದ್ದರಿಂದ ಆರೋಗ್ಯವೇ ಮಹಾಭಾಗ್ಯವಾಗಿದ್ದು ಎಲ್ಲರೂ ಆರೋಗ್ಯ ರಕ್ಷಣೆಗೆ ಆದ್ಯತೆ ನೀಡಬೇಕು ಎಂದು ಲೋಕಸಭಾ ಸದಸ್ಯ ಎಸ್. ಮುನಿಸ್ವಾಮಿ ಅಭಿಪ್ರಾಯಪಟ್ಟರು.

ನಗರದ ಪತ್ರಕರ್ತರ ಭವನದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ಆರ್.ಎಲ್. ಜಾಲಪ್ಪ ವೈದ್ಯಕೀಯ ಮಹಾ ವಿಶ್ವವಿದ್ಯಾಲಯ ಸಂಶೋಧನ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಉಚಿತ ಆರೋಗ್ಯ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಕೋಲಾರದ ಪತ್ರಕರ್ತರ ಭವನದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ಆರ್.ಎಲ್. ಜಾಲಪ್ಪ ವೈದ್ಯಕೀಯ ಮಹಾ ವಿಶ್ವವಿದ್ಯಾಲಯ ಸಂಶೋಧನ ಸಂಸ್ಥೆ ಆಯೋಜಿಸಿದ್ದ ಉಚಿತ ಆರೋಗ್ಯ ಆರೋಗ್ಯ ಶಿಬಿರವನ್ನು ಸಂಸದ ಎಸ್.ಮುನಿಸ್ವಾಮಿ ಉದ್ಘಾಟಿಸಿದರು.

**ಗುಣಮಟ್ಟದ ಆಹಾರ ಸೇವಿಸಿ:** ಆರೋಗ್ಯವನ್ನು ಸದೃಢವಾಗಿಟ್ಟು ಕೊಳ್ಳಲು ಉತ್ತಮ ಗುಣಮಟ್ಟದ ಆಹಾರ ಪದ್ಧತಿಯನ್ನು ಎಲ್ಲರೂ ಅಳವಡಿಸಿ ಕೊಳ್ಳುವಂತಾಗ ಬೇಕು. ಸಿರಿಧಾನ್ಯವನ್ನು ಹೆಚ್ಚಾಗಿ ಬಳಕೆ ಮಾಡುವುದರಿಂದ ಕಾಯಿಲೆಗಳು ದೂರ ಆಗುತ್ತವೆ ನಮ್ಮ ಪೂರ್ವಿಕರು ಗಟ್ಟಿಮುಟ್ಟಾಗಿರಲು ಅವರು ಸಾವಯವ ಕೃಷಿ ಪದ್ಧತಿಯಲ್ಲಿ ಬೆಳೆದ ಆಹಾರಗಳ ಜೊತೆಗೆ ಶ್ರಮ ಪಡುತ್ತಿದ್ದರು. ಆದರೆ ಇಂದಿನ ಆಧುನಿಕ ಪದ್ಧತಿಯಲ್ಲಿ ಶ್ರಮ ಕಡಿಮೆಯಾಗಿರುವುದೇ ಆರೋಗ್ಯ ಕಾಪಾಡಿ ಕೊಳ್ಳುವುದು ದುಸ್ತರವಾಗಿದೆ ಎಂದು ಹೇಳಿದರು.

**ಕೆರೆಗಳ ಸ್ವಚ್ಛತೆ:** ಪ್ರಧಾನಿಯವರ ಸ್ವಚ್ಛ ಭಾರತ್ ಕನಸು ನನಸು ಮಾಡುವ ದೆಸೆಯಲ್ಲಿ ಕೋಲಾಮ್ಮ ಕೆರೆ ಸ್ವಚ್ಛತಾ ಕಾರ್ಯಕ್ಕೆ ಚಾಲನೆ ನೀಡಲಾಗಿದೆ. ಜತೆಗೆ ವಾಕಿಂಗ್ ಪಾಥ್ ಮಾಡಲಾಗುವುದು, ಹಣ್ಣು ಹೂವಿನ ಗಿಡಗಳನ್ನು ಬೆಳೆಸಿ ಪಕ್ಷಿಗಳಿಗೆ ಆಶ್ರಯ ಕಲ್ಪಿಸಲಾಗುವುದು. ದೋಣಿ ವಿಹಾರ ಮಾಡಲು ಅವಕಾಶ ಕಲ್ಪಿಸುವ ಮೂಲಕ ಪ್ರವಾಸತಾಣವಾಗಿ ಮಾರ್ಪಾಡು ಮಾಡುವ ಉದ್ದೇಶವನ್ನು ಹೊಂದಿರುವುದಾಗಿ ತಿಳಿಸಿದರು.

**ಸಂಸದರ ಕಾರ್ಯ ಶ್ಲಾಘನೀಯ:** ರಾಜ್ಯ ಸಮಿತಿ ಸದಸ್ಯ ಬಿ.ವಿ. ಗೋಪಿನಾಥ ಮಾತನಾಡಿ ಕೋಲಾರಮ್ಮ ಕೆರೆಯಲ್ಲಿ ಬೆಳೆದಿರುವ ಮುಳ್ಳು ಗಿಡಗಳನ್ನು ತೆರವುಗೊಳಿಸಿ ಕೆರೆಯನ್ನು ಸ್ವಚ್ಛಗೊಳಿಸುವ ಕೆಲಸಕ್ಕೆ ಸಂಸದ ಮುನಿಸ್ವಾಮಿ ಅವರು ಚಾಲನೆ ನೀಡಿದ್ದಾರೆ, ಅವರ ಈ ಕೆಲಸ ಶ್ಲಾಘನೀಯ ಎಂದರು

ಪತ್ರಕರ್ತರಸಂಘದಅಧ್ಯಕ್ಷಮುನಿರಾಜು, ಕೆ.ಎಸ್. ಗಣೇಶ, ರಾಜೇಂದ್ರ, ಸುರೇಶ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಆರ್.ಎಲ್. ಜಾಲಪ್ಪ ಹೊರ ರೋಗಿಗಳ ನಗರದ ಆಸ್ಪತ್ರೆಯ ವೈದ್ಯಕೀಯ ಉಪಾಧೀಕ್ಷಕ ಡಾ. ಆಶ್ವಥ್ ನಾರಾಯಣ್ ಹಾಗು ಡಾ. ನಸೀರ್ ಅಹಮದ್ ಭಾಗವಹಿಸಿ ಸಂಘದ ವತಿಯಿಂದ ನೀಡಿದ ಸನ್ಮಾನವನ್ನು ಸ್ವೀಕರಿಸಿದರು.